**ಹಿರಿಯ ದಿವಾಣಿ ನ್ಯಾಯಾಧೀಶರು ಮತ್ತು ಪ್ರಥಮ ದರ್ಜೆ ನ್ಯಾಯಿಕ ದಂಡಾಧಿಕಾರಿಗಳ ನ್ಯಾಯಾಲಯ, ಹೊನ್ನಾವರ**

**ಸಿ.ಸಿ. ಸಂಖ್ಯೆ : 90/2020**

**ಚಾ.ಸಾಃ 22, ಫ್ರಾ.ಸಾಃ 14**

| | |
|---|---|
| ಸಾಕ್ಷಿದಾರನ ಹೆಸರು | ರಾಜಶೇಖರ ರಾಥೋಡ |
| ತಂದೆಯ ಹೆಸರು | ಕಾಮಪ್ಪ |
| ವಯಸ್ಸು | 37 ವರ್ಷಗಳು |
| ಉದ್ಯೋಗ | ಪಿಎಸ್ಐ, ಕೋಡೆಕಲ್ ಪೋಲೀಸ್ ಠಾಣೆ, ಗುಲ್ಬರ್ಗ ಜಿಲ್ಲೆ |
| ವಾಸ್ತವ್ಯ | ಕೋಡೆಕಲ್ |

**ಸಾಕ್ಷಿಯನ್ನು ದಿನಾಂಕಃ 07-02-2026 ರಂದು ಕರೆಸಿ ಪ್ರಮಾಣೀಕರಿಸಲಾಯಿತು.**

**ಮುಖ್ಯ ವಿಚಾರಣೆಃ ಎಪಿಪಿಯವರಿಂದ,**

ನಾನು ದಿನಾಂಕಃ 11-04-2019 ರಿಂದ 14-08-2019 ರವರಿಗೆ ಹೊನ್ನಾವರ ಪೋಲೀಸ್ ಠಾಣೆಯಲ್ಲಿ ಪಿಎಸ್ಐ ಆಗಿ ಕರ್ತವ್ಯ ನಿರ್ವಹಿಸಿರುತ್ತೇನೆ.

ದಿನಾಂಕ 23-06-2019 ರಂದು ನಾನು ಠಾಣಾ ಪ್ರಭಾರದಲ್ಲಿದ್ದಾಗ ರಾತ್ರಿ 08-00 ಕ್ಕೆ ಚಾಸಾ-1 ರವರು ಠಾಣೆಗೆ ಹಾಜರಾಗಿ ನೀಡಿದ ದೂರನ್ನು ಪಡೆದುಕೊಂಡು ಠಾಣಾ ಮೊಕದ್ದಮೆ ನಂ.195/2019 ರಂತೆ ಪ್ರಕರಣ ದಾಖಲಿಸಿ ಪ್ರಥಮ ವರ್ತಮಾನ ವರದಿಯನ್ನು ಮಾನ್ಯ ನ್ಯಾಯಾಲಯಕ್ಕೆ ನಿವೇದಿಸಿಕೊಂಡಿರುತ್ತೇನೆ. ದೂರನ್ನು ನೋಡುತ್ತಿದ್ದು ಅದನ್ನು ನಿಪಿ-1 ಎಂದು ಗುರುತಿಸಿದ್ದು, ಸಾಕ್ಷಿ ಸಹಿಯನ್ನು ನಿಪಿ-1(ಬಿ) ಎಂದು ಗುರುತಿಸಲಾಯಿತು. ಪ್ರಥಮ ವರ್ತಮಾನ ವರದಿಯನ್ನು ನೋಡುತ್ತಿದ್ದು ಅದನ್ನು ನಿಪಿ-36 ಎಂದು, ಸಾಕ್ಷಿ ಸಹಿಯನ್ನು ನಿಪಿ-36(ಎ) ಎಂದು ಗುರುತಿಸಲಾಯಿತು.

ನಂತರ ಅದೇ ದಿನ ಈ ಪ್ರಕರಣದ ಕಡತವನ್ನು ಚಾಸಾ-23 ರವರಿಗೆ ವಹಿಸಿರುತ್ತೇನೆ.

**ಪಾಟೀ ಸವಾಲುಃ ಆರೋಪಿ ಪರ ವಕೀಲರಾದ ಶ್ರೀ ವಿ. ಎಂ. ಭಂಡಾರಿ ಯವರಿಂದಃ**

ಫಿರ್ಯಾದುದಾರರು ದೂರಿನ ಜೊತೆಯಲ್ಲಿ ಯಾವುದೇ ವಸ್ತುಗಳನ್ನು ಹಾಜರುಪಡಿಸಿರುವುದಿಲ್ಲ. ಸುಳ್ಳು ದೂರಿನ ಆಧಾರದಲ್ಲಿ ಸುಳ್ಳು ಪ್ರಕರಣ ದಾಖಲಿಸಿದ್ದೇನೆ ಎಂದರೆ ಸರಿಯಲ್ಲ.

**ಮರುವಿಚಾರಣೆಃ ಇರುವುದಿಲ್ಲ.**

**(ತೆರೆದ ನ್ಯಾಯಾಲಯದಲ್ಲಿ ಸಾಕ್ಷಿಯ ಹೇಳಿಕೆಯಂತೆ ಗಣಕೀಕೃತ ಮಾಡಿಸಲಾಯಿತು)**

ಓ.ಹೇ.ಕೇ. ಸರಿ ಇದೆ.

**Sd/-**

**ಹಿರಿಯ ದಿವಾಣಿ ನ್ಯಾಯಾಧೀಶರು ಮತ್ತು**
**ಪ್ರ.ದ.ನ್ಯಾದಂಡಾಧಿಕಾರಿಗಳು, ಹೊನ್ನಾವರ**